# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಪುಸ್ತಕ ಆಯ್ಕೆಗಾಗಿ ಇರುವ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯನ್ನು ಪುನರ್ ರಚಿಸುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ : ಇಡಿ 38 ಎಲ್ಐಬಿ 2017, ಬೆಂಗಳೂರು, ದಿನಾಂಕ:09.11.2017.
2) ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ಇವರ ಏಕ ಕಡತ ಸಂಖ್ಯೆ:ಸಾ.ಗ್ರ.ಇ / ನಿಕ / ಪು.ಖ.ವಿ / ರಾ.ಪು.ಆ.ಸ. ಪುನರ್ ರಚನೆ / 11 / 2019-20.

<<*****>>

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ಸಂಬಂಧಿಸಿದಂತೆ, ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯನ್ನು ಷರತ್ತುಗಳೊಂದಿಗೆ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಸಮಿತಿ ಅಸ್ತಿತ್ವಕ್ಕೆ ಬರುವವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೂ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯನ್ನು ಪುನರ್ ರಚಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ಇವರು ಏಕ ಕಡತದ ಮೂಲಕ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುತ್ತಾ, ಸರ್ಕಾರಿ ಆದೇಶ ಸಂಖ್ಯೆ:ಇಡಿ 38 ಎಲ್ಐಬಿ 2017, ದಿನಾಂಕ :09.11.2017ರ ಆದೇಶದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ಸಂಬಂಧಿಸಿದಂತೆ, ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯನ್ನು ಪುನರ್ ರಚಿಸಿ ನೇಮಿಸಲಾಗಿರುವ ಸಮಿತಿಯು, ದಿನಾಂಕ:09.11.2019ರಂದು ಮುಕ್ತಾಯವಾಗಿದ್ದು, ಸದರಿ ಸಮಿತಿಯನ್ನು ಪುನರ್ ರಚನೆ ಮಾಡುವಂತೆ ಅಧ್ಯಕ್ಷರು ಹಾಗೂ ಸದಸ್ಯರನ್ನೊಳಗೊಂಡಂತೆ ವಿವರಗಳೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಅದರಂತೆ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 27 ಎಲ್ಐಬಿ 2020,**
**ಬೆಂಗಳೂರು, ದಿನಾಂಕ:19.08.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕೂಲಂಕಷವಾಗಿ ಪರಿಶೀಲಿಸಿ, ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ಸಂಬಂಧಿಸಿದಂತೆ, ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯನ್ನು ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಸಮಿತಿ ಅಸ್ತಿತ್ವಕ್ಕೆ ಬರುವವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೂ ಈ ಕೆಳಕಂಡಂತೆ ಅಧ್ಯಕ್ಷರು/ಸದಸ್ಯರುಗಳ ವಿವರಗಳೊಂದಿಗೆ ಸಮಿತಿಯನ್ನು ಪುನರ್ ರಚಿಸಿ ಆದೇಶಿಸಲಾಗಿದೆ.

| | | |
|---|---|---|
| 01 | ಅಧ್ಯಕ್ಷರು | ಡಾ॥ ದೊಡ್ಡರಂಗೇಗೌಡ, ಹಿರಿಯ ಸಾಹಿತಿಗಳು, ಶ್ರೀ ಸನ್ನಿದಿ, ನಂ 140, 3ನೇ ಮುಖ್ಯ ರಸ್ತೆ, ಕತ್ತರಿಗುಪ್ಪೆ (ಪೂರ್ವ), 4ನೇ ಫೇಸ್, ಬನಶಂಕರಿ, 3ನೇ ಹಂತ, ಬೆಂಗಳೂರು-560 085. |
| 02 | ಸದಸ್ಯರು | ಶ್ರೀ ರಾ.ನಂ ಚಂದ್ರಶೇಖರ್, ಸಾಹಿತಿಗಳು, ನಂ.01, ಶ್ರೀನಿಲಯ, ಮಾರಮ್ಮನ ದೇವಸ್ಥಾನ ರಸ್ತೆ, ಕತ್ರಿಗುಪ್ಪೆ, ಬನಶಂಕರಿ, 3ನೇ ಹಂತ, ಬೆಂಗಳೂರು-560 085. |
| 03 | ಸದಸ್ಯರು | ಶ್ರೀ ಆರ್. ದೊಡ್ಡೇಗೌಡ, ಸಾಹಿತಿಗಳು. ನಂ.17/2, ಬೆಳದಿಂಗಳು, 11ನೇ ಮುಖ್ಯರಸ್ತೆ, 5ನೇ ಅಡ್ಡ ರಸ್ತೆ, ವೃಷಭಾವತಿ ನಗರ, ಕಾಮಾಕ್ಷಿಪಾಳ್ಯ, ಬೆಂಗಳೂರು-560 079. |
| 04 | ಸದಸ್ಯರು | ಶ್ರೀ ಎಂ. ಮಂಜುನಾಥ ಬಮ್ಮನಕಟ್ಟಿ, ಪತ್ರಕರ್ತರು ಹಾಗೂ ಸಾಹಿತಿಗಳು, ಕೆ.ಸಿ.ರಾಣಿ ರೋಡ, ಗದಗ – 582101. |
| 05 | ಸದಸ್ಯರು | ಶ್ರೀ ನಿ. ಗಿರಿಗೌಡ, ಕಣಿಯನಹುಂಡಿ, ಹೆಚ್.ಡಿ. ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ. |

.....2

| | | |
|---|---|---|
| 06 | ಸದಸ್ಯರು | ಶ್ರೀ ಡಿ.ಎನ್. ಲೋಕಪ್ಪ, ಪ್ರಕಾಶಕರು ಹಾಗೂ ಮುದ್ರಕರು, ನಂ12/1, ಈವನಿಂಗ್ ಬಜಾರ್ ಹಿಂಭಾಗ, ಶಿವರಾಂಪೇಟೆ , ಮೈಸೂರು- 570001 |
| 07 | ಸದಸ್ಯರು | ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು. |
| 08 | ಸದಸ್ಯರು | ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಕಾಶಕರ ಸಂಘ (ರಿ), ಅಂಕಿತ ಪುಸ್ತಕ ಗಾಂಧಿ ಬಜಾರ್ ಮುಖ್ಯರಸ್ತೆ, ಬಸವನಗುಡಿ, ಬೆಂಗಳೂರು-04. |
| 09 | ಸದಸ್ಯರು | ಅಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್ತು, ಬೆಂಗಳೂರು |
| 10 | ಸದಸ್ಯರು | ನಿರ್ದೇಶಕರು, ಪ್ರಸಾರಾಂಗ, ಧಾರವಾಡ ವಿಶ್ವವಿದ್ಯಾಲಯ, ಧಾರವಾಡ. |
| 11 | ಸದಸ್ಯರು | ಅಧ್ಯಕ್ಷರು, ಕರ್ನಾಟಕ ವಿಜ್ಞಾನ ಪರಿಷತ್ತು, ಬೆಂಗಳೂರು |
| 12 | ಸದಸ್ಯರು | ಡಾ॥ ಎ.ವೈ. ಅಸುಂಡಿ, ಅಧ್ಯಕ್ಷರು, ರಾಜ್ಯ ಗ್ರಂಥಾಲಯ ಸಂಘ(ರಿ), ಬೆಂಗಳೂರು. |
| 13 | ಸದಸ್ಯರು | ಅಧ್ಯಕ್ಷರು, ಕರ್ನಾಟಕ ಕನ್ನಡ ಬರಹಗಾರರು ಮತ್ತು ಪ್ರಕಾಶಕರ ಸಂಘ (ರಿ), ಕೊಟ್ಟಿಗೆಪಾಳ್ಯ, ಬೆಂಗಳೂರು. |
| 14 | ಸದಸ್ಯರು | ವಿವಿಧ ಭಾಷೆಯ ಭಾಷಾ ಪರಿಣಿತರನ್ನು ಕೋ-ಆಪ್ಟ್ ಮಾಡಿಕೊಳ್ಳುವುದು. |
| 15 | ಸದಸ್ಯ ಕಾರ್ಯದರ್ಶಿಗಳು | ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು. |

**ಷರತ್ತುಗಳು:**

1. ಕನ್ನಡ ಮತ್ತು ಆಂಗ್ಲ ಭಾಷೆ ಪುಸ್ತಕಗಳನ್ನು ಹೊರತುಪಡಿಸಿ, ಇತರೆ ಭಾರತೀಯ ಭಾಷೆಯ ಪುಸ್ತಕಗಳನ್ನು ಆಯ್ಕೆ ಮಾಡಲು ಆಯಾಯಾ ಭಾಷೆಯ ಭಾಷಾ /ವಿಷಯ ಪರಿಣಿತರನ್ನು ಕೋ-ಆಪ್ಟ್ ಮಾಡಿಕೊಳ್ಳಬಹುದು.
2. ಈ ಸಮಿತಿಯ ಕಾರ್ಯವ್ಯಾಪ್ತಿಯು ಸರ್ಕಾರಿ ಆದೇಶ ಸಂಖ್ಯೆ:ಇಡಿ 01 ಎಲ್‌ಬಿಪಿ 2004, ದಿನಾಂಕ:07.02.2005ರ ಅನುಬಂಧ -2ರಲ್ಲಿ ನಿಗಧಿಪಡಿಸಿರುವಂತೆ ಇರುತ್ತದೆ ಹಾಗೂ ಸದರಿ ಆದೇಶದ ಅನುಬಂಧ-1ರ ಪ್ರಕಾರ, ನಿಗದಿಪಡಿಸಿದ ಪುಸ್ತಕ ಆಯ್ಕೆಯ ಕಾರ್ಯವಿಧಾನವನ್ನು ಈ ಸಮಿತಿಯು ಅನುಸರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Hosamath 12/8/2020

(ಮಹಾಂತಯ್ಯ ಎಸ್ ಹೊಸಮಠ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ (ಸಾಮಾನ್ಯ).

ಇವರಿಗೆ:-

1) ಮಹಾಲೇಖಪಾಲರು (ಲೆಕ್ಕ ಮತ್ತು ಪರಿಶೋಧನೆ), ಬೆಂಗಳೂರು.
2) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
3) ಪ್ರಧಾನ ನಿರ್ದೇಶಕರು,ರಾಜ್ಯ ಲೆಕ್ಕಪತ್ರ ಮತ್ತು ಲೆಕ್ಕ ಪರಿಶೋಧನಾ ಇಲಾಖೆ, ಶಾಂತಿ ನಗರ, ಬೆಂಗಳೂರು.
4) ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು.
5) ಅಧ್ಯಕ್ಷರು ಹಾಗೂ ಎಲ್ಲಾ ಸದಸ್ಯರುಗಳು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿ. (ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ಇವರ ಮುಖಾಂತರ)
6) ರಾಜ್ಯದ ಎಲ್ಲಾ ಉಪ ನಿರ್ದೇಶಕರು / ಮುಖ್ಯ ಗ್ರಂಥಲಯಾಧಿಕಾರಿಗಳಿಗೆ (ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ಇವರ ಮುಖಾಂತರ)
7) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9) ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.